**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1570
ಸದಸ್ಯರ ಹೆಸರು : ಶ್ರೀ ಆರ್.ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 20.03.2020
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತಿಯ ವಿವಿಧ ಗ್ರಾಮ ಸಭೆಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಯು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುವ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸಭೆಗೆ ಹಾಜರಾಗುವಂತೆ ನೋಟೀಸ್ ಮೂಲಕ ಆಹ್ವಾನಿಸುತ್ತಿದ್ದರು ಸಹ ಅಧಿಕಾರಿಗಳು ಸಭೆಗೆ ಹಾಜರಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಗ್ರಾಮ ಪಂಚಾಯತಿಗಳಲ್ಲಿ ನಡೆಯುವ ಕೆಲವು ಗ್ರಾಮ ಸಭೆಗಳಲ್ಲಿ ಸರ್ಕಾರದ ವಿವಿಧ ಇಲಾಖೆಗಳ ಸ್ಥಳೀಯ ಮಟ್ಟದ ಅಧಿಕಾರಿಗಳು / ನೌಕರರು ಅನಿವಾರ್ಯ ಸಂದರ್ಭಗಳಲ್ಲಿ ಗೈರು ಹಾಜರಾಗಿರುವುದು ತಿಳಿದು ಬಂದಿರುತ್ತದೆ. |
| (ಆ) | ಅಧಿಕಾರಿಗಳು ಗ್ರಾಮ ಸಭೆಗಳಿಗೆ ಹಾಜರಾಗದೆ ಇರುವುದರಿಂದ ಗ್ರಾಮ ಮಟ್ಟದ ವಿವಿಧ ಅಭಿವೃದ್ಧಿ ಕಾಮಗಾರಿಗಳ ರೂಪು ರೇಷೆಗಳನ್ನು ಸಮರ್ಪಕವಾಗಿ ಸಿದ್ಧಪಡಿಸಲು ವಿಫಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಇ) | ಬಂದಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | ಗ್ರಾಮ ಸಭೆಗೆ ಹಾಜರಾಗದೆ ಇರುವ ಅಧಿಕಾರಿಗಳಿಗೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿರವರು ನೋಟೀಸು ನೀಡಿ ಗ್ರಾಮ ಸಭೆಗಳಿಗೆ ಕಡ್ಡಾಯವಾಗಿ ಹಾಜರಾಗುವಂತೆ ತಿಳಿಸಿರುತ್ತಾರೆ.<br>ಗ್ರಾಮ ಸಭೆಗೆ ಸಕಾರಣವಿಲ್ಲದೆ ಗೈರು ಹಾಜರಾಗುವ ಅಧಿಕಾರಿಗಳಿಗೆ ಶಿಸ್ತು ಕ್ರಮ ಜರುಗಿಸಲು ಗ್ರಾಮ ಸಭೆಯು ಶಿಫಾರಸ್ಸು ಮಾಡಬಹುದಾಗಿರುತ್ತದೆ. |

ಸಂ. ಗ್ರಾಅಪ 317 ಗ್ರಾಪಂಅ 2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.